ಕರ್ನಾಟಕ ಸರ್ಕಾರ

ನಂ. ಗ್ರಾಅಪ 616 ಗ್ರಾಪಂಅ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 01-09-2015

# ಸುತ್ತೋಲೆ

ವಿಷಯ:- 14ನೇ ಹಣಕಾಸು ಆಯೋಗದ ಅನುದಾನದಡಿಯ ನಿರ್ವಹಣಾ ಅನುದಾನವನ್ನು ಗ್ರಾಮಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:D.O. No. secy(PR)/15, ದಿನಾಂಕ: 07-07-2015.

ಮೇಲೆ ತಿಳಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಕೇಂದ್ರ ಸರ್ಕಾರದ ಪತ್ರದೊಡನೆ 14ನೇ ಹಣಕಾಶು ಆಯೋಗದ ಅನುದಾನದಡಿಯ ನಿರ್ವಹಣಾ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ 14ನೇ ಹಣಕಾಸು ಆಯೋಗದ ಶಿಫಾರಸ್ಸು-ಕಂ-9.76 ಮತ್ತು 9.77 ರಂತೆ ಮಾನದಂಡಗಳನ್ನು ನಿಗಧಿಪಡಿಸಿರುತ್ತದೆ.

14ನೇ ಹಣಕಾಸು ಆಯೋಗದ ನಿರ್ವಹಣಾ ಅನುದಾನಕ್ಕೆ ಗ್ರಾಮ ಪಂಚಾಯಿತಿಗಳು ಅರ್ಹತೆ ಪಡೆಯಬೇಕಾದರೆ ಕೆಳಕಂಡ ಷರತ್ತುಗಳನ್ನು ಕಡ್ಡಾಯವಾಗಿ ಪೂರೈಸಬೇಕು.

- ಪ್ರತಿಯೊಂದು ಗ್ರಾಮ ಪಂಚಾಯಿತಿಯು ಪ್ರಸ್ತುತ ವರ್ಷದ ಅಂದರೆ 2016-17ನೇ ಸಾಲಿನಲ್ಲಿ ನಿರ್ವಹಣಾ ಅನುದಾನವನ್ನು ಪಡೆಯಬೇಕಾದರೆ ಹಿಂದಿನ ಆರ್ಥಿಕ ವರ್ಷವಾದ 2014-15ನೇ ಸಾಲಿನ 2017-18ನೇ ಸಾಲಿನ ಅನುದಾನ ಪಡೆಯಬೇಕಾದರೆ, 2015-16 ಸಾಲಿನ ಹಾಗೂ 2018-19 ನೇ ಸಾಲಿನ ಅನುದಾನ ಪಡೆಯಬೇಕಾದರೆ, 2016-17ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ನು ಕಡ್ಡಾಯವಾಗಿ ಒಪ್ಪಿಸಬೇಕಾಗಿರುತ್ತದೆ. ಇದೇ ಮಾದರಿಯಲ್ಲಿ ಮುಂದಿನ ಆರ್ಥಿಕ ವರ್ಷಗಳಲ್ಲಿ ಸಂಬಂಧಿಸಿದ ಅನುದಾನವನ್ನು ಬಿಡುಗಡೆ ಮಾಡಲಾಗುವುದು.
- ಗ್ರಾಮ ಪಂಚಾಯಿತಿಗಳು ಸ್ಥಳೀಯ ಮಟ್ಟದ ಸ್ವಯಂ ಸರ್ಕಾರ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ವಿಧವಾದ ಅಂಕಿ ಅಂಶಗಳು ಹಾಗೂ ಮಾಹಿತಿಯನ್ನು ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸುವ ತಂತ್ರಾಂಶಗಳಲ್ಲಿ ಅಳವಡಿಸಿರಬೇಕು. ಈ ಅಂಕಿ ಅಂಶಗಳ ಆಧಾರದ ಮೇಲೆ ನೀತಿ ನಿರ್ಧಾರಗಳನ್ನು ಕೈಗೊಳ್ಳುವುದರಿಂದ ಗ್ರಾಮ ಪಂಚಾಯಿತಿಗಳ ತಂತ್ರಾಂಶಗಳಲ್ಲಿ ನಿಖರವಾದ ಅಂಕಿಅಂಶ ಹಾಗೂ ವಾಸ್ತವಾಂಶ ಮಾಹಿತಿಗಳನ್ನು ಅಳವಡಿಸಿರಬೇಕು. ಈ ತಂತ್ರಾಂಶಗಳನ್ನು ಆಗ್ಗಿಂದಾಗ್ಗೆ ಪರಿಶೀಲಿಸಬೇಕು. ಹಾಗೂ ಪರಿಷ್ಕರಿಸಬೇಕು.

* ಗ್ರಾಮ ಪಂಚಾಯಿತಿಗಳು ತಮ್ಮ ಸಂಪನ್ಮೂಲವನ್ನು ಹೆಚ್ಚಿಸಲು ಹಾಗೂ ಕ್ರೋಢೀಕರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಗ್ರಾಮ ಪಂಚಾಯಿತಿ ಹಂತದಲ್ಲಿ ವಾರ್ಷಿಕವಾಗಿ ಆಯವ್ಯಯಕ್ಕೆ ಸಂಬಂಧಿಸಿದಂತೆ, ಸ್ವೀಕೃತಿ ಮತ್ತು ವೆಚ್ಚಗಳ ವಿವರಗಳನ್ನು ತಂತ್ರಾಂಶದಲ್ಲಿ ದಾಖಲಿಸಿರಬೇಕು. ಜನ ಸಾಮಾನ್ಯರಿಗೆ ಈ ಮಾಹಿತಿಗಳು ಸ್ಥಳೀಯವಾಗಿ ಹಾಗೂ ಸುಲಭವಾಗಿ ಲಭ್ಯವಾಗುವಂತಿರಬೇಕು.

ಮೇಲೆ ತಿಳಿಸಿರುವ ಅರ್ಹತೆಗಳನ್ನು ಪಡೆಯದಿರುವ ಗ್ರಾಮ ಪಂಚಾಯಿತಿಗಳಿಗೆ ನಿರ್ವಹಣಾ ಅನುದಾನ ಲಭ್ಯವಾಗುವುದಿಲ್ಲ. ಮೇಲ್ಕಂಡ ಷರತ್ತುಗಳನ್ನು ಪೂರೈಸಿರುವ ಗ್ರಾಮ ಪಂಚಾಯಿತಿಗಳಿಗೆ ಮಾತ್ರ ಮಾರ್ಚ್ 2015 ರ ನಿರ್ವಹಣಾ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

2/9/15

(ಕೆ.ಯಾಲಕ್ಕಿಗೌಡ)
ನಿರ್ದೇಶಕರು(ಪಂ.ರಾಜ್)
ಹಾಗೂ ಪದನಿಮಿತ್ತ, ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ರವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು/ಕಾರ್ಯದರ್ಶಿಗಳು

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು
2. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು
3. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು
4. ನಿರ್ದೇಶಕರು (ಪಂ.ರಾಜ್-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ ರವರಿಗೆ ಮುಂದಿನ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿದೆ.
6. ಇಲಾಖೆ ವೆಬ್‌ಸೈಟ್
7. ಹೆಚ್ಚುವರಿ ಪ್ರತಿ/ಕಡತಕ್ಕೆ